All India Radio: Bangalore
National Bulletins In Kannada
06.08.2025 / 1.10pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
06.08.2025 / 1.10pm
<><*<><>*><>

ಮುಖ್ಯಾಂಶಗಳು

೧. ಸಂಸತ್ತಿನ ಉಭಯ ಸದನಗಳಲ್ಲಿ ವಿರೋಧ ಪಕ್ಷಗಳ ಗದ್ದಲ; ರಾಜ್ಯಸಭೆ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ

೨. ನವದೆಹಲಿಯಲ್ಲಿಂದು ಕರ್ತವ್ಯ ಭವನ -೩ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ

೩. ಉತ್ತರಾಖಂಡದ ಉತ್ತರಕಾಶಿಯಲ್ಲಿ ಭೀಕರ ಮೇಘಸ್ಫೋಟ; ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿಯಿಂದ ವೈಮಾನಿಕ ಸಮೀಕ್ಷೆ

೪. ರೆಪೊ ದರ ಶೇಕಡ ೫.೫ ರಲ್ಲಿ ಯಥಾಸ್ಥಿತಿ; ತಟಸ್ಥ ನಿಲುವು ಕಾಯ್ದುಕೊಂಡ ಭಾರತೀಯ ರಿಸರ್ವ್ ಬ್ಯಾಂಕ್

೫. ಎಂಟು ರಾಜ್ಯಗಳ ಗುಡ್ಡಗಾಡು ಪ್ರದೇಶಗಳಲ್ಲಿ ಭಾರೀ ಮಳೆ; ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ನದಿಗಳು

><><><><><><><><><><

ವಿವಿಧ ವಿಷಯಗಳ ಕುರಿತು ಸಂಸತ್ತಿನ ಉಭಯ ಸದನಗಳಲ್ಲಿ ವಿರೋಧ ಪಕ್ಷಗಳು ಗದ್ದಲ ಮುಂದುವರೆಸಿವೆ. ಈ ಹಿನ್ನೆಲೆಯಲ್ಲಿ ರಾಜ್ಯಸಭೆಯನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ. ಲೋಕಸಭೆ ಕಲಾಪ ಬೆಳಿಗ್ಗೆ ೧೧ ಗಂಟೆಗೆ ಆರಂಭವಾದಾಗ, ಸ್ಪೀಕರ್ ಓಂ ಬಿರ್ಲಾ ಅವರು, ಆಗಸ್ಟ್ ೬, ೧೯೪೫ ರಂದು ಜಪಾನಿನ ಹಿರೋಷಿಮಾ ಮತ್ತು ನಾಗಾಸಾಕಿ ಪರಮಾಣು ಬಾಂಬ್ ದಾಳಿಯಲ್ಲಿ ಮೃತ ಪಟ್ಟವರ ಸ್ಮರಣಾರ್ಥ ಗೌರವ ನಮನ ಸಲ್ಲಿಸಿದರು. ಸದನದ ಪರವಾಗಿ, ಓಂ ಬಿರ್ಲಾ ಸಾಮೂಹಿಕ ವಿನಾಶಕಾರಿ ಶಸ್ತ್ರಾಸ್ತ್ರಗಳಿಲ್ಲದ ವಿಶ್ವದ ಬದ್ಧತೆಯನ್ನು ಪುನರುಚ್ಚರಿಸಿದರು. ಪರಮಾಣು ಶಸ್ತ್ರಾಸ್ತ್ರಗಳನ್ನು ನಿರ್ಮೂಲನೆ ಮಾಡಲು ಹಾಗೂ ಜಾಗತಿಕ ಶಾಂತಿ ಮತ್ತು ಸಾಮರಸ್ಯವನ್ನು ಖಚಿತಪಡಿಸಿಕೊಳ್ಳಲು ಸಾಮೂಹಿಕವಾಗಿ ಕೆಲಸ ಮಾಡಲು ನಿರ್ಧರಿಸಿದರು. ಜೀವ ಕಳೆದುಕೊಂಡವರಿಗೆ ಗೌರವ ಸೂಚಕವಾಗಿ ಸದನ ಮೌನ ಆಚರಿಸಿತು. ಬಳಿಕ ಸ್ಪೀಕರ್ ಪ್ರಶ್ನೋತ್ತರ ಕಲಾಪ ನಡೆಸಲು ಪ್ರಯತ್ನಿಸಿದರು, ಆದರೆ ವಿರೋಧ ಪಕ್ಷದ ಸದಸ್ಯರು, ಬಿಹಾರದಲ್ಲಿ

ಮತದಾರರ ಪಟ್ಟಿ ಪರಿಷ್ಕರಣೆ ವಿಷಯದ ಕುರಿತು ಚರ್ಚಿಸಲು ಒತ್ತಾಯಿಸಿ ಘೋಷಣೆ ಕೂಗಲು ಪ್ರಾರಂಭಿಸಿದರು. ಗದ್ದಲ ಮುಂದುವರಿದಂತೆ, ಸ್ಪೀಕರ್ ಕೆಲಕಾಲ ಸದನವನ್ನು ಮುಂದೂಡಿದರು. ರಾಜ್ಯಸಭೆಯಲ್ಲೂ ಇದೇ ರೀತಿಯ ವಾತಾವರಣ ಕಂಡುಬಂತು. ಬೆಳಿಗ್ಗೆ ೧೧ ಗಂಟೆಗೆ ಸದನ ಆರಂಭವಾದಾಘ ನಿನ್ನೆ ನಿಧನರಾಧ ರಾಜ್ಯಸಭೆ ಮಾಜಿ ಸದಸ್ಯ ಸತ್ಯಪಾಲ್ ಮಲಿಕ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಉಪಸಭಾಪತಿ ಹರಿವಂಶ್ ಅವರು, ಸತ್ಯಪಾಲ್ ಮಲಿಕ್ ರ ಸೇವೆ ಮತ್ತು ಸಾಧನೆಯನ್ನು ಸ್ಮರಿಸಿದರು. ನಂತರ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಸದಸ್ಯರಿಂದ ೩೫ ಮುಂದೂಡಿಕೆ ನೋಟಿಸ್‌ಗಳನ್ನು ಸ್ವೀಕರಿಸಲಾಗಿದೆ ಎಂದು ಉಪಸಭಾಪತಿ ಹರಿವಂಶ್ ಹೇಳಿದರು ಆದರೆ ತೀರ್ಪನ್ನು ಉಲ್ಲೇಖಿಸಿ ನೋಟಿಸ್‌ಗಳನ್ನು ತಿರಸ್ಕರಿಸಲಾಯಿತು. ಬಳಿಕ, ವಿರೋಧ ಪಕ್ಷದ ಸದಸ್ಯರು ಸಮಸ್ಯೆಗಳನ್ನು ಪ್ರಸ್ತಾಪಿಸುವ ಮೂಲಕ ಪ್ರತಿಭಟನೆ ಪ್ರಾರಂಭಿಸಿದರು. ಇದು ಶೂನ್ಯ ವೇಳೆಯಾಗಿರುವುದರಿಂದ ಹಲವಾರು ಸದಸ್ಯರು ತುರ್ತು ಸಾರ್ವಜನಿಕ ಪ್ರಾಮುಖ್ಯತೆಯ ವಿಷಯವನ್ನು ಕೇಳಲು ಬಯಸುತ್ತಾರೆ ಮತ್ತು ಸದನದಲ್ಲಿ ಅಡಚಣೆ ಉಂಟುಮಾಡುವುದು ಸೂಕ್ತವಲ್ಲ ಎಂದು ಉಪ ಸಭಾಪತಿ ಹೇಳಿದರು. ಗದ್ದಲದ ನಡುವೆ, ಸಭಾಪತಿಗಳು ಮಧ್ಯಾಹ್ನ ೨ ಗಂಟೆಯವರೆಗೆ ಸದನವನ್ನು ಮುಂದೂಡಿದರು.

><><><><><><><><><

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ಕರ್ತವ್ಯ ಪಥದಲ್ಲಿ ಕರ್ತವ್ಯ ಭವನ -೩ ಅನ್ನು ಉದ್ಘಾಟಿಸಿದರು. ಕರ್ತವ್ಯ ಭವನ -೩ ನಿರ್ಮಾಣ ಸರ್ಕಾರದ ಆಡಳಿತ ಪ್ರಕ್ರಿಯೆಗಳನ್ನು ಸುಗಮಗೊಳಿಸುವ ಮತ್ತು ಚುರುಕಾದ ಆಡಳಿತವನ್ನು ಸಕ್ರಿಯಗೊಳಿಸುವ ಗುರಿಯನ್ನು ಹೊಂದಿದೆ.ಗೃಹ ಸಚಿವಾಲಯ ಸೇರಿದಂತೆ ಹಲವು ಇಲಾಖೆಗಳು ಈ ಕಟ್ಟಡದಲ್ಲಿ ಒಂದೇ ಸೂರಿನಡಿ ಕಾರ್ಯ ನಿರ್ವಹಿಸಲಿವೆ.

><><><><><><><><><

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಧರಾಲಿ ಪ್ರದೇಶದಲ್ಲಿ ಖೀರ್ ಗಂಗಾ ನದಿಯಲ್ಲಿ ಮೇಘಸ್ಫೋಟದಿಂದಾಗಿ ಉಂಟಾದ ಪ್ರವಾಹಪೀಡಿತ ಪ್ರದೇಶದಲ್ಲಿ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳು ಸಮರೋಪಾದಿಯಲ್ಲಿ ಮುಂದುವರೆದಿವೆ. ಈ ಸಮಯದಲ್ಲಿ ಭಾರತೀಯ ಸೇನೆ, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಜಿಲ್ಲಾಡಳಿತ ಮತ್ತು ಇತರ ಸಂಸ್ಥೆಗಳು ಕಾರ್ಯಾಚರಣೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿವೆ. ಇಲ್ಲಿಯವರೆಗೆ, ೧೩೦ ಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಇಂದು ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ನಡೆಸಿದರು ಮತ್ತು ಡೆಹ್ರಾಡೂನ್‌ನಲ್ಲಿರುವ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರದಿಂದ ಪರಿಸ್ಥಿತಿಯನ್ನು ಪರಿಶೀಲಿಸಿದರು.

><><><><><><><><><><

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಉತ್ತರಾಖಂಡದ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿ, ಅವಳಿ ಮೇಘಸ್ಫೋಟದಿಂದ ಉಂಟಾಗಿರುವ ಭೀಕರ ಪರಿಸ್ಥಿತಿಯ ಬಗ್ಗೆ ಮಾಹಿತಿ ಪಡೆದರು. ರಕ್ಷಣಾ ಕಾರ್ಯಾಚರಣೆ ಕುರಿತು ಪ್ರಧಾನಿಯವರಿಗೆ ವಿವರ ನೀಡಿದ ಮುಖ್ಯಮಂತ್ರಿ, ಪರಿಸ್ಥಿತಿ ನಿಭಾಯಿಸಲು ಸರ್ಕಾರ ಸಂಪೂರ್ಣವಾಗಿ ಸಿದ್ಧವಾಗಿದ್ದು, ಸಂಬಂಧಪಟ್ಟ ಎಲ್ಲಾ ಸಂಸ್ಥೆಗಳು, ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು. ನಿರಂತರ ಮಳೆಯಿಂದಾಗಿ, ಕೆಲವು ಪ್ರದೇಶಗಳನ್ನು ತಲುಪುವುದು ಕಷ್ಟಕರವಾಗಿದ್ದರೂ, ಪರಿಹಾರ ಒದಗಿಸಲು ದಿನದ ೨೪ ಗಂಟೆಯೂ ಪ್ರಯತ್ನಗಳು ನಡೆಯುತ್ತಿವೆ ಎಂದು ಅವರು ತಿಳಿಸಿದರು. ಬಿಕ್ಕಟ್ಟನ್ನು ನಿರ್ವಹಿಸುವಲ್ಲಿ ಕೇಂದ್ರ ಸರ್ಕಾರ ರಾಜ್ಯಕ್ಕೆ ಸಾಧ್ಯವಿರುವ ಎಲ್ಲ ಸಹಾಯವನ್ನು ನೀಡುತ್ತದೆ ಎಂದು ಪ್ರಧಾನಿ ಭರವಸೆ ನೀಡಿದ್ದಾರೆ. ಪ್ರಧಾನಿಯವರೊಂದಿಗಿನ ಸಂಭಾಷಣೆಯ ವಿವರಗಳನ್ನು ಹಂಚಿಕೊಂಡಿರುವ ಮುಖ್ಯಮಂತ್ರಿ, ಧರಾಲಿಯಲ್ಲಿ ನಡೆಯುತ್ತಿರುವ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳ ಬಗ್ಗೆ ಪ್ರಧಾನಿಯವರಿಗೆ ಮಾಹಿತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಮೇಘಸ್ಫೋಟದಿಂದಾಗಿ ಈ ಪ್ರದೇಶದಲ್ಲಿ ಅಪಾರ ಹಾನಿಯಾಗಿದ್ದು, ಹಲವರು ಕಾಣೆಯಾಗಿದ್ದಾರೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಗಳ ನಡುವೆಯೂ ರಕ್ಷಣಾ ಕಾರ್ಯಗಳು ಮುಂದುವರೆದಿವೆ. ಈ ನಡುವೆ, ಭಾರತ ಹವಾಮಾನ ಇಲಾಖೆ, ಉತ್ತರಾಖಂಡಕ್ಕೆ ಇಂದು 'ಭಾರೀ ಮಳೆ' ಎಚ್ಚರಿಕೆ ಮತ್ತು ರೆಡ್ ಅಲರ್ಟ್ ಘೋಷಿಸಿದೆ. ಉತ್ತರಕಾಶಿ, ರುದ್ರಪ್ರಯಾಗ, ಚಮೋಲಿ, ಬಾಗೇಶ್ವರ, ಪಿಥೋರಗಢ, ಉಧಮ್ ಸಿಂಗ್ ನಗರ, ಡೆಹ್ರಾಡೂನ್, ನೈನಿತಾಲ್, ಚಂಪಾವತ್ ಮತ್ತು ಪೌರಿ ಗರ್ವಾಲ್ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

><><><><><><><><><><

ಭಾರತೀಯ ರಿಸರ್ವ್ ಬ್ಯಾಂಕಿನ ಹಣಕಾಸು ನೀತಿ ಸಮಿತಿ, ಇಂದು ರೆಪೊ ದರವನ್ನು ಶೇಕಡ ೫.೫ ರಲ್ಲಿ ಯಥಾಸ್ಥಿತಿಯಲ್ಲಿ ಮುಂದುವರೆಸಿ, ತಟಸ್ಥ ನಿಲುವನ್ನು ಕಾಯ್ದುಕೊಂಡಿದೆ. ಪರಿಣಾಮವಾಗಿ, ಸ್ಥಿರ ಠೇವಣಿ ಸೌಲಭ್ಯ ದರ, ಶೇಕಡ ೫.೨೫ ಮತ್ತು ಮಾರ್ಜಿನಲ್ ಸ್ಟ್ಯಾಂಡಿಂಗ್ ಸೌಲಭ್ಯ ದರ ಶೇಕಡ ೫.೭೫ ರಷ್ಟಿರುತ್ತದೆ. ಭಾರತೀಯ ಆಮದುಗಳ ಮೇಲಿನ ಅಮೇರಿಕ ಸುಂಕದ ಹೊರತಾಗಿಯೂ ಆರ್.ಬಿ.ಐ ತನ್ನ ೨೦೨೬ರ ಆರ್ಥಿಕ ವರ್ಷದ ಜಿಡಿಪಿ ಬೆಳವಣಿಗೆಯ ಮುನ್ಸೂಚನೆಯನ್ನು ಶೇಕಡ ೬.೫ರಲ್ಲಿಯೇ ಉಳಿಸಿಕೊಂಡಿದೆ. ಆರ್ಥಿಕ ವರ್ಷ ೨೦೨೬ರ ಹಣದುಬ್ಬರವು, ಜೂನ್‌ನ ಶೇಕಡ ೩.೭ ಅಂದಾಜಿಗಿಂತ ಕಡಿಮೆಯಾಗಿದೆ, ಆದರೂ ೨೦೨೬ ರಲ್ಲಿ ಸಿ.ಪಿಐ ಗ್ರಾಹಕ ಬೆಲೆ ಸೂಚ್ಯಂಕ ಶೇಕಡ ೪.೯ ತಲುಪುವ ನಿರೀಕ್ಷೆಯಿದೆ. ಭಾರತೀಯ ರಿಸರ್ವ್ ಬ್ಯಾಂಕಿನ ಹಣಕಾಸು ನೀತಿ ಸಮಿತಿ ಇದೇ ೪, ೫ ಮತ್ತು ೬ ರಂದು ಸಭೆ ಸೇರಿತ್ತು.

><><><><><><><><><><><

ಭಾರೀ ಮಳೆಯಿಂದಾಗಿ ಅಸ್ಸಾಂ, ಬಿಹಾರ, ಉತ್ತರ ಪ್ರದೇಶ, ಜಾರ್ಖಂಡ್, ಮಧ್ಯಪ್ರದೇಶ, ಉತ್ತರಾಖಂಡ ಮತ್ತು ಪಶ್ಚಿಮ ಬಂಗಾಳದಾದ್ಯಂತ ಹಲವಾರು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ತಗ್ಗು ಪ್ರದೇಶಗಳಲ್ಲಿ ವಾಸಿಸುವ ಜನರು ತೊಂದರೆಗೀಡಾಗಿದ್ದಾರೆ. ಪರ್ವತ ರಾಜ್ಯಗಳಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ನದಿಗಳು ಮತ್ತಷ್ಟು ಉಕ್ಕಿ ಹರಿಯುತ್ತಿವೆ. ಉತ್ತರಾಖಂಡದ ರುದ್ರಪ್ರಯಾಗ, ತೆಹ್ರಿ ಮತ್ತು ಹರಿದ್ವಾರ ಜಿಲ್ಲೆಗಳಲ್ಲಿ ಅಲಕನಂದಾ, ಮಂದಾಕಿನಿ ಮತ್ತು ಭಾಗೀರಥಿ ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ಉತ್ತರಕಾಶಿ, ರುದ್ರಪ್ರಯಾಗ, ಚಮೋಲಿ, ಬಾಗೇಶ್ವರ, ಪಿಥೋರಗಢ, ಉಧಮ್ ಸಿಂಗ್ ನಗರ, ಡೆಹ್ರಾಡೂನ್, ನೈನಿತಾಲ್, ಚಂಪಾವತ್ ಮತ್ತು ಪೌರಿ ಗರ್ವಾಲ್ ಸೇರಿದಂತೆ ಹಲವಾರು ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಿಮಾಚಲ ಪ್ರದೇಶದಲ್ಲಿಯೂ ಭಾರೀ ಮಳೆಯಾಗುತ್ತಿದ್ದು, ಭೂಕುಸಿತ ಮತ್ತು ಹಠಾತ್ ಪ್ರವಾಹಕ್ಕೆ ಕಾರಣವಾಗುತ್ತಿದೆ. ಕೇಂದ್ರ ಜಲ ಆಯೋಗದ, ಪ್ರವಾಹ ಮುನ್ಸೂಚನೆ ಮೇಲ್ವಿಚಾರಣಾ ನಿರ್ದೇಶನಾಲಯದ ಇತ್ತೀಚಿನ ಮಾಹಿತಿಯ ಪ್ರಕಾರ, ಗಂಗಾ ನದಿ ಮತ್ತು ಅದರ ಉಪನದಿಗಳು ಉಕ್ಕಿ ಹರಿಯುತ್ತಿದ್ದು, ಬಿಹಾರ ಮತ್ತು ಉತ್ತರ ಪ್ರದೇಶ ರಾಜ್ಯದ ಹೆಚ್ಚಿನ ಭಾಗಗಳು ನೀರಿನಲ್ಲಿ ಮುಳುಗಡೆಯಾಗಿವೆ. ಈ ಪ್ರದೇಶದಲ್ಲಿ 'ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

><><><><><><><><><><><

ಬಿಜೆಪಿ ನಾಐಕ ಅಮಿತ್ ಶಾ ಮಾನನಷ್ಟ ಮೊಕದ್ದಮೆಗೆ ಸಂಬಂಧಿಸಿದಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಇಂದು ಜಾರ್ಖಂಡ್‌ನ ಚಾಯ್ ಬಾಸಾದಲ್ಲಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಮುಂದೆ ಹಾಜರಾದರು. ವಿಚಾರಣಾ ಪ್ರಕ್ರಿಯೆಗಳಿಗೆ ಸಹಕರಿಸುವ ಷರತ್ತಿನ ಮೇಲೆ ನ್ಯಾಯಾಲಯವು ಅವರಿಗೆ ಜಾಮೀನು ನೀಡಿದೆ.

><><><><><><><><><><><

ಪ್ರಧಾನಿ ನರೇಂದ್ರ ಮೋದಿ ಅವರು ನಾಳೆ ನವದೆಹಲಿಯಲ್ಲಿ ಎಂ.ಎಸ್. ಸ್ವಾಮಿನಾಥನ್ ಶತಮಾನೋತ್ಸವ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಕೃಷಿ ವಿಜ್ಞಾನದ ಅತ್ಯುನ್ನತ ವ್ಯಕ್ತಿ ಮತ್ತು ಆಹಾರ ಭದ್ರತೆಯ ಪ್ರವರ್ತಕ, ಪ್ರೊಫೆಸರ್ ಸ್ವಾಮಿನಾಥನ್ ಅವರ ಜನ್ಮ ಶತಮಾನೋತ್ಸವದ ನೆನಪಿಗಾಗಿ, ನಾಳೆಯಿಂದ ಶನಿವಾರದವರೆಗೆ ಶತಮಾನೋತ್ಸವ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ.

><><><><><><><><><><><

ಪ್ರಾದೇಶಿಕ ಭಾಷೆಗಳನ್ನು ಉತ್ತೇಜಿಸುವುದು ಮತ್ತು ಸಾಂಸ್ಕೃತಿಕವಾಗಿ ಶ್ರೀಮಂತ ಕಾರ್ಯಕ್ರಮಗಳನ್ನು ರೂಪಿಸುವುದು ದೂರದರ್ಶನದ ಪ್ರಮುಖ ಅಂಶವಾಗಿದೆ ಎಂದು ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ ಹೇಳಿದ್ದಾರೆ. ಜಲಂಧರ್‌ನಲ್ಲಿ ನಿನ್ನೆ ಸಂಜೆ ಪಂಜಾಬ್ ದೂರದರ್ಶನದ ಬೆಳ್ಳಿ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ, ದೂರದರ್ಶನ ಜಾಲದ ಎಲ್ಲಾ ಪ್ರಾದೇಶಿಕ ಚಾನೆಲ್‌ಗಳಲ್ಲಿ ಪಂಜಾಬಿ ಚಾನೆಲ್ ಅಗ್ರಸ್ಥಾನದಲ್ಲಿದೆ. ದೂರದರ್ಶನ ಈಗ ವೇವ್ಸ್ ಒಟಿಟಿ ಪ್ಲಾಟ್‌ಫಾರ್ಮ್ ಅನ್ನು ಹೊಂದಿದ್ದು, ಅದನ್ನು ಜಗತ್ತಿನ ಎಲ್ಲಿಯಾದರೂ ಮೊಬೈಲ್ ಫೋನ್‌ಗಳಲ್ಲಿಯೂ ವೀಕ್ಷಿಸಬಹುದು. ಇದು ಹಳೆಯ ಮತ್ತು ಹೊಸ ಕಾರ್ಯಕ್ರಮಗಳ ಮಿಶ್ರಣವನ್ನು ಪ್ರಸ್ತುತಪಡಿಸುತ್ತದೆ ಎಂದು ಅವರು ಹೇಳಿದರು.

><><><><><><><><><><><><><

ಪಂಜಾಬ್‌ನ ಮೊಹಾಲಿಯ ಕೈಗಾರಿಕಾ ಪ್ರದೇಶದ ಆಮ್ಲಜನಕ ತಯಾರಿಸುವ ಘಟಕದಲ್ಲಿ ಇಂದು ಬೆಳಿಗ್ಗೆ ಸಂಭವಿಸಿದ ತೀವ್ರ ಸ್ಫೋಟದಲ್ಲಿ ಇಬ್ಬರು ಸಾವನ್ನಪಿದ್ದು, ಮೂವರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ ದಮನ್‌ದೀಪ್ ಕೌರ್ ಮಾಹಿತಿ ನೀಡಿದ್ದಾರೆ.

><><><><><><><><><><><><><

ಇಂದು ಬೆಳಿಗ್ಗೆ ಶ್ರೀಲಂಕಾ ನೌಕಾಪಡೆಯು, ಪ್ರಾದೇಶಿಕ ಜಲ ಗಡಿಯನ್ನು ದಾಟಿದ್ದಕ್ಕಾಗಿ ಕನಿಷ್ಠ ಹದಿನಾಲ್ಕು ಭಾರತೀಯ ಮೀನುಗಾರರನ್ನು ಬಂಧಿಸಿದೆ. ಒಂದು ದೋಣಿಯಲ್ಲಿ ೧೦ ಮೀನುಗಾರರು ಹಾಗೂ ಮತ್ತೊಂದು ದೋಣಿಯಲ್ಲಿ ೪ ಮೀನುಗಾರರಿದ್ದರು. ರಾಮೇಶ್ವರಂನ ಮೀನುಗಾರರನ್ನು ವಿಚಾರಣೆಗಾಗಿ ಪುಟ್ಟಲಂನಲ್ಲಿರುವ ಶ್ರೀಲಂಕಾ ನೌಕಾಪಡೆ ಶಿಬಿರಕ್ಕೆ ಕರೆದೊಯ್ಯಲಾಗಿದೆ.

><><><><><><><><><><><><><

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ನಾಳೆ ಮಾಸ್ಕೋದಲ್ಲಿ ರಷ್ಯಾದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಭಾರತ-ರಷ್ಯಾ ರಕ್ಷಣಾ ಮತ್ತು ಭದ್ರತಾ ಸಹಕಾರದ ಬಗ್ಗೆ ಚರ್ಚಿಸಲಿದ್ದಾರೆ.ಭಾರತದ ಸರಕುಗಳ ಮೇಲಿನ ಶೇಕಡಾ ೨೫ ರಷ್ಟು ಸುಂಕ ಹೆಚ್ಚಳವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿರುವ ಸಮಯದಲ್ಲಿ ಈ ಭೇಟಿ ಮಹತ್ವದ್ದಾಗಿದೆ. ಮಾಸ್ಕೋ ಭೇಟಿಯ ಸಮಯದಲ್ಲಿ, ಅಜಿತ್ ದೋವಲ್ ತೈಲ ವಿಷಯ ಮತ್ತು ಮುಂಬರುವ ಪ್ರಧಾನಿ ನರೇಂದ್ರ ಮೋದಿ ಹಾಗೂ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಜೊತೆ ಶೃಂಗಸಭೆಯ ಬಗ್ಗೆಯೂ ಮಾತುಕತೆ ನಡೆಸಲಿದ್ದಾರೆ.

><><><><><><><><><><

ರಷ್ಯಾದಿಂದ ತೈಲ ಖರೀದಿಸುವವರ ಮೇಲಿನ ದಂಡನಾತ್ಮಕ ಸುಂಕಗಳ ಕುರಿತು ನಿರ್ಧರಿಸುವ ಮೊದಲು ಇಂದು ಮಾಸ್ಕೋದಲ್ಲಿ ರಷ್ಯಾದ ನಾಯಕರು ಮತ್ತು ಅವರ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ನಡುವಿನ ಸಭೆಯಲ್ಲಿ ಯಾವ ನಿರ್ಣಯಕ್ಕೆ ಬರಲಾಗುತ್ತದೆ ಎಂದು ಕಾಯುತ್ತಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

><><><><><><><><><><

ಸೌದಿ ಅರೇಬಿಯಾದ ಜೆಡ್ಡಾದ ಕಿಂಗ್ ಅಬ್ದುಲ್ಲಾ ಸ್ಪೋರ್ಟ್ಸ್ ಸಿಟಿಯಲ್ಲಿ ನಿನ್ನೆ ನಡೆದ ಈಖ಼ಃಂ ಏಷ್ಯಾ ಕಪ್- ೨೦೨೫ ಗ್ರೂಪ್ ಸಿ ಆರಂಭಿಕ ಪಂದ್ಯದಲ್ಲಿ ಭಾರತೀಯ ಪುರುಷರ ತಂಡ, ಅದ್ಭುತ ಪ್ರದರ್ಶನ ನೀಡಿದರೂ, ಹೆಚ್ಚುವರಿ ಸಮಯದಲ್ಲಿ ಜೋರ್ಡಾನ್ ವಿರುದ್ಧ ೯೧-೮೪ ಅಂಕಗಳಿಂದ ಪರಾಭವಗೊಂಡಿದೆ.  ತಂಡವು, ನಾಳೆ ಚೀನಾವನ್ನು ಎದುರಿಸಲಿದೆ. ನಂತರ ಶನಿವಾರ ಆತಿಥೇಯ ಸೌದಿ ಅರೇಬಿಯಾ ವಿರುದ್ಧ ಪಂದ್ಯದೊಂದಿಗೆ ಗುಂಪು ಹಂತವನ್ನು ಮುಕ್ತಾಯಗೊಳಿಸುತ್ತದೆ.

><><><><><><><><><><

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೬೪ ಅಂಕಗಳು ಏರಿಕೆಕಂಡು, ೮೦ ಸಾವಿರದ ೭೭೪ ಅಂಕಗಳಲ್ಲಿ ತನ್ನ ಆರಂಭಿಕ ವಹಿವಾಟು ನಡೆಸಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ೧೬ ಅಂಕಗಳು ಏರಿಕೆಯಾಗಿ, ಆರಂಭಿಕ ವಹಿವಾಟಿನಲ್ಲಿ ೨೪ ಸಾವಿರದ ೬೬೫ ಅಂಕಗಳನ್ನು ದಾಖಲಿಸಿದೆ.

><><><><><><><><><><